ಶ್ರೀ ಪಿ.ಎಂ. ನರೇಂದ್ರಸ್ವಾಮಿ: ಮಾನ್ಯ ಅಧ್ಯಕ್ಷರೆ, ಖಾಸಗಿ ನಿರ್ಣಯಗಳನ್ನು ಮಂಡಿಸಲು ಅವಕಾಶ ಮಾಡಿಕೊಡಬೇಕು.

14. ಚುನಾವಣಾ ಪ್ರಸ್ತಾವ

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು): ದಿನಾಂಕ 27–01–2014 ರಂದು ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಒಬ್ಬ ಸದಸ್ಯರನ್ನು ಚುನಾಯಿಸಲು ಚುನಾವಣಾ ಪ್ರಸ್ತಾವವನ್ನು ಮಂಡಿಸಿದ್ದು, ಚುನಾವಣಾ ಕಾರ್ಯಕ್ರಮ ವೇಳಾಪಟ್ಟಿಯನ್ನು ಹೊರಡಿಸಲಾಗಿರುತ್ತದೆ. ಅದರಂತೆ ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಒಬ್ಬ ಸದಸ್ಯರನ್ನು ನಾಮನಿರ್ದೇಶನ ಮಾಡಲು ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರವನ್ನು ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು: ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ಒಬ್ಬ ಸದಸ್ಯರನ್ನು ನಾಮನಿರ್ದೇಶನ ಮಾಡಲು ಈ ಸದನವು ಮಾನ್ಯ ಸಭಾಧ್ಯಕ್ಷರಿಗೆ ಅಧಿಕಾರವನ್ನು ನೀಡಲು ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಮಂಡಿಸಿದ ಪ್ರಸ್ತಾವಕ್ಕೆ ಸದನದ ಸಹಮತಿ ಇದೆ ಎಂದು ಭಾವಿಸಲಾಗಿದೆ.